Development 52...

ಕರ್ನಾಟಕ ಸರ್ಕಾರ

ಸಂಖ್ಯೆ: MWD 09 WGA 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 27-09-2021

ಇವರಿಂದ:
ಸರ್ಕಾರದ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು
ವಕ್ಫ್ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ
I.No. 320
27 SEP
ನಂ. ಕನ್ನಿಂಗ್ಯಾಮ್ ರಸ್ತೆ, ಬೆಂಗಳೂರು-052.

ಇವರಿಗೆ:
ಮುಖ್ಯ ಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ವಕ್ಫ್ ಮಂಡಳಿ,
ಕನ್ನಿಂಗ್ ಹ್ಯಾಂ ರಸ್ತೆ,
ಬೆಂಗಳೂರು.

ಮಾನ್ಯರೇ,

ವಿಷಯ: ಗೌಸಿಯಾ ಅಹಲೇ-ಸುನ್ನತ್-ಉಲ್ ಜಮಾತ್, ಉಪ್ಪಣಸಿ ಗ್ರಾಮ, ಹಾನಗಲ್ ತಾಲ್ಲೂಕು, ಹಾವೇರಿ ಜಿಲ್ಲೆ ಇದರ 2ನೇ ಸಮಾಜದ ಸಮುದಾಯ ಭವನ ನಿರ್ಮಾಣ ಮಾಡಲು ಅನುದಾನ ಕೋರಿರುವ ಬಗ್ಗೆ.

ಉಲ್ಲೇಖ: ಆರ್ಥಿಕ ಇಲಾಖೆಯ ಅ.ಟಿ.ಸಂಖ್ಯೆ: ಆಇ 424 ವೆಚ್ಚ-3/2021, ದಿನಾಂಕ: 17-09-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅ.ಟಿ.ಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಟಿಪ್ಪಣಿಯಲ್ಲಿ ಶ್ರೀ ಶಿವಕುಮಾರ್ ಉದಾಸಿ, ಮಾನ್ಯ ಸಂಸದರು, ಹಾವೇರಿ ಇವರು ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಉಪ್ಪುಣಸಿ ಗ್ರಾಮದ ಗೌಸಿಯಾ ಅಹಲೇ-ಸುನ್ನತ್ –ಉಲ್ ಜಾಮತ್ ನ ಎರಡನೇ ಸಮಾಜದ ಸಮುದಾಯ ಭವನ ನಿರ್ಮಾಣಕ್ಕಾಗಿ ರೂ.15.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡುವಂತೆ ಕೋರಿದ್ದು, ಸದರಿ ಸಂಸ್ಥೆಗೆ ಅನುದಾನ ಮಂಜೂರು ಮಾಡುವಂತೆ ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿರುತ್ತಾರೆಂದು ತಿಳಿಸಿರುತ್ತಾರೆ.

ಮುಂದುವರೆದು, ಸದರಿ ಸಂಸ್ಥೆಗೆ ರೂ.15.00 ಲಕ್ಷಗಳ ಅನುದಾನವನ್ನು ಲೆಕ್ಕ ಶೀರ್ಷಿಕೆ: 2225-04-800-0-03(059) ಅಲ್ಪಸಂಖ್ಯಾತರ ಯಾತ್ರಾ ಸ್ಥಳಗಳಲ್ಲಿ ಮೂಲ ಸೌಲಭ್ಯ ಅಭಿವೃದ್ಧಿ ಅಡಿಯಲ್ಲಿ ಬಾಕಿ ಲಭ್ಯವಿರುವ ಅನುದಾನದಲ್ಲಿ ಬಿಡುಗಡೆ ಮಾಡುವಂತೆ ಹಾಗೂ ವರ್ಷಾಂತ್ಯದಲ್ಲಿ ಅನುದಾನದ ಕೊರತೆ ಉಂಟಾದಲ್ಲಿ ರೂ.15.00 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಒದಗಿಸಲಾಗುವುದೆಂದು ತಿಳಿಸಿರುತ್ತಾರೆ.

Grants

ಆದ್ದರಿಂದ, ಸದರಿ ಸಂಸ್ಥೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಅನುದಾನ ಬಿಡುಗಡೆ ಮಾಡಲು ಕ್ರಮಕೈಗೊಳ್ಳುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ಮಾಹಿತಿಯನ್ನು ನೀಡುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

289

......2

Scanned with CamScanner

<u>ಷರತ್ತುಗಳು</u>

1. 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ "2225-04-800-0-03(059)" ರಡಿಯಲ್ಲಿ ಅಲ್ಪಸಂಖ್ಯಾತರ ಯಾತ್ರಾ ಸ್ಥಳಗಳಲ್ಲಿ ಮೂಲ ಸೌಲಭ್ಯ ಅಭಿವೃದ್ಧಿಗೆ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.
2. ಸದರಿ ಸಂಸ್ಥೆಯ ಕಾಮಗಾರಿಯ ಅಂದಾಜು ಪಟ್ಟಿ ಮತ್ತು ಎಲ್ಲಾ ಪೂರಕ ದಾಖಲೆಗಳನ್ನು ಪಡೆದು ಪರಿಶೀಲಿಸಿದ ನಂತರವೇ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸತಕ್ಕದ್ದು.
3. ಸದರಿ ಸಂಸ್ಥೆಗೆ ರೂ. 5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. 2ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.
4. ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಸಂಬಂಧ ಪಟ್ಟ ಸಂಸ್ಥೆಯಿಂದ ಪಡೆಯತಕ್ಕದ್ದು.

ತಮ್ಮ ವಿಶ್ವಾಸಿ,

(ಮುಕ್ತಾರ್ ಪಾಷ ಹೆಚ್.ಜಿ.) 27/9/2021

ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

Scanned with CamScanner